ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 08-01-2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಮಾಜಿ ಪ್ರಧಾನಿ ದಿ: ಲಾಲ್‌ಬಹದ್ದೂರ್ ಶಾಸ್ತ್ರೀ ಅವರ 50 ನೇ ಪುಣ್ಯ ತಿಥಿ ಅಂಗವಾಗಿ ಮಾಲಾರ್ಪಣೆ ಕಾರ್ಯಕ್ರಮ<br><br>ಟಿ.ಬಿ. ಜಯಚಂದ್ರ, ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಉನ್ನತ ಶಿಕ್ಷಣ ಸಚಿವರಿಂದ | 11-1-2016 ಸೋಮವಾರ ಬೆಳಗ್ಗೆ 10-00 ಗಂಟೆಗೆ | ವಿಧಾನ ಸೌಧ ಪಶ್ಚಿಮ ದಿಕ್ಕಿನಲ್ಲಿರುವ ದಿ: ಲಾಲ್ ಬಹದ್ದೂರ್ ಶಾಸ್ತ್ರೀ ಅವರ ಪ್ರತಿಮೆ ಬಳಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ |
| 2 | ರಾಜ್ಯಮಟ್ಟದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಯುವ ಸಂಸತ್ ಸ್ಪರ್ಧೆಯ ಬಹುಮಾನ ವಿತರಣಾ ಸಮಾರಂಭ<br><br>ಅಧ್ಯಕ್ಷತೆ:<br><br>ಟಿ.ಬಿ. ಜಯಚಂದ್ರ, ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಉನ್ನತ ಶಿಕ್ಷಣ ಸಚಿವರು<br><br>ಉದ್ಘಾಟನೆ:<br><br>ಡಿ.ಹೆಚ್. ಶಂಕರಮೂರ್ತಿ ಸಭಾಪತಿಗಳು, ಕರ್ನಾಟಕ ವಿಧಾನ ಪರಿಷತ್ತು | 11-1-2016 ಸೋಮವಾರ ಮಧ್ಯಾಹ್ನ 3-00 ಗಂಟೆಗೆ | ಚನ್ನಬಸಪ್ಪ ಸಭಾಂಗಣ, ಕರ್ನಾಟಕ ಸರ್ಕಾರ ಸಚಿವಾಲಯ ಕ್ಲಬ್ ಕಬ್ಬನ್‌ಪಾರ್ಕ್, ಕೆ.ಆರ್. ವೃತ್ತ, ಬೆಂಗಳೂರು |

| | | | |
|---|---|---|---|
| | ಮುಖ್ಯ ಅತಿಥಿಗಳು:<br><br>ಕಿಮ್ಮನೆ ರತ್ನಾಕರ,<br>ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಖಾತೆ ಸಚಿವರು | | |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

**ಸ್ವಾಮಿ ವಿವೇಕಾನಂದ ವಾಣಿ – "ನೀವು ದ್ವೇಷ ಮತ್ತು ಅಸೂಯೆಗಳನ್ನು ಹೊರಸೂಸಿದರೆ ಅವುಗಳು ಚಕ್ರಬಡ್ಡಿ ಸಮೇತ ನಿಮಗೆ ಹಿಂತಿರುಗುತ್ತವೆ. ಯಾವ ಶಕ್ತಿಯೂ ಅದನ್ನು ತಡೆಯಲಾರದು. ಒಮ್ಮೆ ನೀವು ಅವುಗಳನ್ನು ಚಲಿಸುವಂತೆ ಮಾಡಿದರೆ ಅದರ ದುಷ್ಪರಿಣಾಮಗಳನ್ನು ನೀವು ಅನುಭವಿಸಲೇ ಬೇಕು. ನೀವಿದನ್ನು ನೆನಪಿನಲ್ಲಿಟ್ಟರೆ ದುಷ್ಕಾರ್ಯಗಳಿಂದ ನೀವು ಪಾರಾಗಬಹುದು."**

## ಸ್ವಾಮಿ ವಿವೇಕಾನಂದರ ಜನ್ಮ ದಿನಾಚರಣೆ ಅಂಗವಾಗಿ ರಾಜ್ಯದಲ್ಲಿ "ರಾಷ್ಟ್ರೀಯ ಯುವ ದಿನಾಚರಣೆ ಸಪ್ತಾಹ

**ಬೆಂಗಳೂರು, ಜನವರಿ 8, 2016 (ಕರ್ನಾಟಕ ವಾರ್ತೆ)**

ರಾಜ್ಯದ ಕಾಲೇಜು ಶಿಕ್ಷಣ ಆಯುಕ್ತರ ಸುತ್ತೋಲೆಯಲ್ಲಿ ರಾಷ್ಟ್ರ ಕಂಡ ಮಹಾನ್ ದಾರ್ಶನಿಕ, ತತ್ವಶಾಸ್ತ್ರಜ್ಞ, ಚಿಂತಕ, ಶಿಕ್ಷಣ ತಜ್ಞ, ವೀರ ಸನ್ಯಾಸಿ ಸ್ವಾಮಿ ವಿವೇಕಾನಂದರ (12–01–1863) ಜನ್ಮದಿನವಾದ ಜನವರಿ 12 ನ್ನು ಭಾರತೀಯ ಯುವ ಜನಾಂಗಕ್ಕೆ ಸ್ವಾಮಿ ವಿವೇಕಾನಂದರ ಆದರ್ಶ ಹಾಗೂ ವಿಚಾರಧಾರೆಗಳು ಸ್ಫೂರ್ತಿದಾಯಕವಾಗಲಿ ಎಂಬ ಸದಾಶಯದಿಂದ 1984 ರಿಂದ ದೇಶದಾದ್ಯಂತ "ರಾಷ್ಟ್ರೀಯ ಯುವ ದಿನಾಚರಣೆಯ ಸಪ್ತಾಹ" ಯನ್ನಾಗಿ ಆಚರಿಸಲಾಗುತ್ತಿದೆ. ಸಾಮಾಜಿಕ ಹಾಗೂ ಆಧ್ಯಾತ್ಮಿಕ ಸಾಧಕರೂ ಆಗಿರುವ ಸ್ವಾಮಿ ವಿವೇಕಾನಂದರು ಯುವ ಜನಾಂಗಕ್ಕೆ ನೀಡಿರುವ ಸಂದೇಶಗಳು ಅಂದಿಗೂ ಇಂದಿಗೂ ಎಂದೆಂದಿಗೂ ಸ್ವೀಕಾರಾರ್ಹವಾಗಿರುತ್ತದೆ.

ರಾಷ್ಟ್ರೀಯತೆ, ದೇಶಭಕ್ತಿ ಹಾಗೂ ಭಾರತೀಯರ ಜೀವನದಲ್ಲಿ ಅದರಲ್ಲೂ ವಿಶೇಷವಾಗಿ ಸ್ವಾಮಿ ವಿವೇಕಾನಂದರ ಗುರಿಯಾಗಿದ್ದ ಯುವ ಜನಾಂಗದಲ್ಲಿ ದೇಶ ಕಟ್ಟುವ, ದೇಶದ ಭವಿಷ್ಯವನ್ನು ಅತ್ಯುಜ್ವಲವಾಗಿ, ರೂಪಿಸುವ, ಒಡೆದ ಮನಸ್ಸುಗಳಿಗೆ ಭಾವೈಕ್ಯದ ಬೆಸುಗೆ ಹಾಕುವ ಅದ್ಭುತ ಸಾಮರ್ಥ್ಯ ಇರುವ ಯುವಶಕ್ತಿಗೆ ಈ ದೇಶದ ಭವ್ಯ ಇತಿಹಾಸ, ಪರಂಪರೆ, ಸಂಸ್ಕೃತಿಗಳ ವಿಚಾರದಲ್ಲಿ ಹೆಮ್ಮೆಪಡಬೇಕಿದೆ. ವಿದ್ಯಾರ್ಥಿಗಳು ತಮ್ಮ ವರ್ತಮಾನದ ಕರ್ತವ್ಯದ ಬಗ್ಗೆ ಆಲೋಚನೆ ಮಾಡುವಂತೆ ಹಾಗೂ ಕಾರ್ಯಪ್ರವೃತ್ತರಾಗುವಂತೆ ಸ್ವಾಮಿ ವಿವೇಕಾನಂದರು ಬೋಧಿಸಿರುವ ಮೌಲ್ಯಗಳನ್ನು ರಾಜ್ಯದಾದ್ಯಂತ ಸಾರ್ವಜನಿಕರು, ಕಾಲೇಜು ವಿದ್ಯಾರ್ಥಿಗಳು ಮತ್ತು ಯುವ ಜನತೆಗೆ ಸ್ಫೂರ್ತಿಯ ಸಂದೇಶವನ್ನು ನೀಡುವ ನಿಟ್ಟಿನಲ್ಲಿ ರಾಷ್ಟ್ರೀಯ ಯುವ ದಿನಾಚರಣೆ ಆಚರಿಸಲಾಗುತ್ತಿದೆ. ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿನಾಂಕ: 12–01–2016 ರಿಂದ 19–1–2016 ರವರೆಗೆ "ರಾಷ್ಟ್ರೀಯ ಯುವ ದಿನಾಚರಣೆಯ ಸಪ್ತಾಹ"ವನ್ನು ಆಚರಿಸಲು ಹಾಗೂ ಈ

ಸಪ್ತಾಹ ಕಾರ್ಯಕ್ರಮದಲ್ಲಿ ವಿವೇಕಾನಂದರ ತತ್ವ, ಆದರ್ಶ ಹಾಗೂ ಧ್ಯೇಯಗಳನ್ನು ಯುವ ಜನಾಂಗಕ್ಕೆ ಪರಿಚಯಿಸುವ ನಿಟ್ಟಿನಲ್ಲಿ ರಾಷ್ಟ್ರೀಯ ಯುವ ಸಪ್ತಾಹ ಕಾರ್ಯಕ್ರಮದ ಮಾರ್ಗಸೂಚಿಗಳನುಸಾರ ಸ್ವಾಮಿ ವಿವೇಕಾನಂದರ ಜನ್ಮ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸುತ್ತೋಲೆ ಹೊರಡಿಸಲಾಗಿದೆ.

ಅದರಂತೆ, ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳು, ಕಾಲೇಜು ಶಿಕ್ಷಣ/ ತಾಂತ್ರಿಕ ಶಿಕ್ಷಣ ಇಲಾಖೆಯ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನರಹಿತ ಪದವಿ ಕಾಲೇಜುಗಳಲ್ಲಿ ಸ್ವಾಮಿ ವಿವೇಕಾನಂದರ ಜನ್ಮ ದಿನಾಚರಣೆಯನ್ನು ಆಚರಿಸಲು ರಾಜ್ಯ ಸರ್ಕಾರ ಸರ್ಕಾರದ ಆದೇಶದಲ್ಲಿ ಸ್ವಾಮಿ ವಿವೇಕಾನಂದವರ ಜನ್ಮದಿನಾಚರಣೆ ಅಂಗವಾಗಿ ದಿನಾಂಕ **12-011-2016** ರಿಂದ **19-01-2016** ರವರೆಗೆ "ರಾಷ್ಟ್ರೀಯ ಯುವ ದಿನಾಚರಣೆಯ ಸಪ್ತಾಹ" ವನ್ನಾಗಿ ಆಯಾ ದಿನದ ಕಾರ್ಯಕ್ರಮಗಳನ್ನು ನಿರ್ವಹಿಸುವಂತೆ ಆದೇಶಿಸಲಾಗಿದೆ.

ಸ್ವಾಮಿ ವಿವೇಕಾನಂದರ ನಿರ್ಧಾರ ಹೀಗಿತ್ತು- "ಆಧುನಿಕ ಪೀಳಿಗೆಯಲ್ಲಿ, ಯುವ ಪೀಳಿಗೆಯಲ್ಲಿ ನನಗೆ ನಂಬಿಕೆಯಿದೆ. ಅವರಿಂದಲೇ ನನಗೆ ಬೇಕಾದ ಕಾರ್ಯಕರ್ತರು ಹೊರಹೊಮ್ಮುತ್ತಾರೆ. ಸಿಂಹದಂತೆ ಅವರು ಸಮಸ್ಯೆಯನ್ನು ನಿವಾರಿಸುತ್ತಾರೆ". ಯುವ ಶಕ್ತಿಯ ಆಶ್ರಯದಲ್ಲಿ ವಿದ್ಯಾರ್ಥಿಗಳು ಮತ್ತು **18-40** ವರ್ಷ ವಯೋಮಾನದ ವಿದ್ಯಾರ್ಥಿಗಳಲ್ಲದ ಯುವಕರು ಸ್ವಾಮಿ ವಿವೇಕಾನಂದ ಯುವ ಮಂಡಲಿ, ಎಚ್ಚೆತ್ತ ಯುವಕರ ವೇದಿಕೆ, ವಿವೇಕಾನಂದರ ಕ್ಲಬ್‌ಗಳ ಮೂಲಕ ಸಕ್ರಿಯರಾಗಲು ಉತ್ತೇಜಿಸಲಾಗುತ್ತದೆ. ಈ ಸಂಘಟನೆಗಳು ಸ್ಥಾನೀಯ ಅವಶ್ಯಕತೆಗಳು ಮತ್ತು ಪ್ರಕೃತಿಗೆ ಅನುಗುಣವಾಗಿ ಕಾರ್ಯವನ್ನು ನಡೆಸುತ್ತವೆ. ಶಕ್ತಿ ಹಾಗೂ ಸುರಕ್ಷೆ, ಸ್ವ ಅಧ್ಯಾಯ ಮತ್ತು ಸೇವೆಗೆ ಸಂಬಂಧಿಸಿದ ಕಾರ್ಯಕ್ರಮಗಳು ರಾಜ್ಯಾದ್ಯಂತ ನಡೆಯುತ್ತವೆ.

ಸ್ವಾಮಿ ವಿವೇಕಾನಂದರು, "ಯಾರು ಇತರರಿಗಾಗಿ ಬದುಕುತ್ತಾರೋ, ಅವರೇ ನಿಜವಾಗಿ ಬದುಕುವವರು. ಇತರರು ಬದುಕಿಯೂ ಸತ್ತಂತೆಯೇ" ಎಂದು ಹೇಳಿದ್ದಾರೆ.

ರಾಷ್ಟ್ರ ನಿರ್ಮಾಣದ ಕಾರ್ಯದಲ್ಲಿ ಗಣ್ಯರು ಮತ್ತು ಬುದ್ದಿ ಜೀವಿಗಳಿಗೆ ಬಹಳ ದೊಡ್ಡ ಜವಾಬ್ದಾರಿಯಿದೆ. ಸಮಾಜದ ಎಲ್ಲಾ ರಂಗಗಳಲ್ಲಿರುವ ಇಂತಹ ಚಿಂತಕರನ್ನು ಮತ್ತು ಪ್ರಭಾವಿ ವ್ಯಕ್ತಿಗಳನ್ನು ತೊಡಗಿಸಲು ಈ ಕಾರ್ಯಕ್ರಮಗಳನ್ನು ಯೋಜಿಸಲಾಗುತ್ತದೆ.

ನಗರವಾಸಿ ಯುವಕರು ಗ್ರಾಮಗಳಲ್ಲಿನ ಕಾರ್ಯಕ್ಕೆ ಸಮಯ ನೀಡುವಂತೆ ಪ್ರೇರೇಪಿಸಲು, ಅಸ್ಪೃಶ್ಯತೆಯ ಆಚರಣೆಯಿಲ್ಲದ, ಮತಾಂತರ ನಡೆಯದ, ವ್ಯಸನಮುಕ್ತ ಪೊಲೀಸರ ಹಾಗೂ ನ್ಯಾಯಾಲಯಗಳ ಮೇಲೆ ಅವಲಂಬಿತವಾಗಿರದ, ರಾಸಾಯನಿಕ ಗೊಬ್ಬರಗಳನ್ನು ಉಪಯೋಗಿಸದ ಗ್ರಾಮಗಳ ನಿರ್ಮಾಣಕ್ಕಾಗಿ, ದೀರ್ಘಕಾಲೀನ ಸೇವಾ ಪ್ರಕಲ್ಪಗಳಲ್ಲಿ ಅವರನ್ನು ತೊಡಗಿಸುವುದು, ನಗರಗಳಲ್ಲಿರುವ ಗ್ರಾಮದಂತಿರುವ ಪ್ರದೇಶಗಳನ್ನೂ ಸಹ ವಿವೇಕ ಬಸ್ತಿಯನ್ನಾಗಿ ಅಭಿವೃದ್ಧಿ ಮಾಡುವ ಯತ್ನ ಯುವ ಶಕ್ತಿಯದಾಗಬೇಕು.

"ದೇಶದ ಭವಿಷ್ಯವು ಅಲ್ಲಿನ ಜನರ ಸ್ಥಿತಿಯ ಮೇಲೆ ಅವಲಂಬಿತವಾಗಿದೆ. ಅವರನ್ನು ನೀವು ಎಬ್ಬಿಸಬಲ್ಲಿರಾ? ಅವರ ಆಂತರಿಕ ಆಧ್ಯಾತ್ಮಿಕ ಪ್ರಕೃತಿಯನ್ನು ಕಳೆದುಹಾಕದೆ, ಅವರು ಕಳೆದುಕೊಂಡಿರುವ ತಮ್ಮತನವನ್ನು ಅವರಿಗೆ ನೀವು ನೀಡಬಲ್ಲಿರೇನು? ಈ ರೀತಿಯಾಗಿ ವಿವೇಕಾನಂದರು ಪಂಥಾಹ್ವಾನ ನೀಡಿದರು.

ಬಾಬು:ಕೆಎಂ

# ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು, ಜನವರಿ 8, 2016 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ:10-01-2016ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಉದಯರಾಗ**" ಎಂಬ ಶೀರ್ಷಿಕೆಯಡಿ ಕುಣಿಗಲ್ ರಾಮಚಂದ್ರ ಮತ್ತು ತಂಡದವರಿಂದ ಜನಪದ ಗೀತೆ, ಭಾವಗೀತೆ, ಪರಿಸರ ಗೀತೆಗಳ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2. ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಸಂಧ್ಯಾರಾಗ**" ಎಂಬ ಶೀರ್ಷಿಕೆಯಡಿ ಶ್ರೀ ನಂಜುಂಡಸ್ವಾಮಿ, ಚಾಮರಾಜನಗರ ಜಿಲ್ಲೆ , ಯಳಂದೂರು ತಾಲ್ಲೂಕ್ ಮದ್ದೂರು ಗ್ರಾಮ, ಇವರಿಂದ ಜನಪದ ಗೀತೆ, ಭಜನೆ ಮತ್ತು ಭಾವಗೀತೆಗಳ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
3. ಬೆಳಿಗ್ಗೆ 6.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
4. ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ(ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
5. ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
6. ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ-ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಬೆಂಗಳೂರುರವರು ವಿವಿಧ ಅಲಂಕಾರಿಕ ಗಿಡಗಳು ಮತ್ತು ಉದ್ಯಾನವನ ಸಲಕರಣೆಗಳ ಮಾರಾಟವನ್ನು ಕೈಗೊಳ್ಳುತ್ತಾರೆ.

7. ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರುರವರ ವತಿಯಿಂದ ನಗರ ಕೇಂದ್ರ ಗ್ರಂಥಾಲಯ ಮತ್ತು ಇಂದಿರಾ ಪ್ರಿಯದರ್ಶಿನಿ ಮಕ್ಕಳ ಗ್ರಂಥಾಲಯದ ಆವರಣದಲ್ಲಿ ಪುಸ್ತಕ ಪ್ರದರ್ಶನವನ್ನು ಏರ್ಪಡಿಸಲಾಗಿದೆ.

8. ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

### I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- **ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ವತಿಯಿಂದ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 08.00 ಗಂಟೆಯಿಂದ 09.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ "ಸ್ಪೂರ್ತಿ ಸ್ಕೂಲ್ ಅಫ್ ಡಾನ್ಸ್", ಬೆಂಗಳೂರುರವರಿಂದ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಸಂಜೆ 4.00 ಗಂಟೆಯಿಂದ 5.00 ಗಂಟೆಯವರೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮತ್ತು ಅಕ್ಷಯ ಫೌಂಡೇಷನ್ ರವರ ಸಹಯೋಗದೊಂದಿಗೆ ದೊಡ್ಡಕಲ್ಲಹಳ್ಳಿ ನಾರಾಯಣಪ್ಪ, ಬೆಂಗಳೂರುರವರಿಂದ ಶ್ರೀಕಂಠೇಶಗೌಡರ ಸಾಹಿತ್ಯ ಚಿಂತನೆ– ಕುರಿತು ಕನ್ನಡ ಉಪನ್ಯಾಸ ಕಾರ್ಯಕ್ರಮ ಹಾಗೂ ತೇಜಶ್ರೀ ಮತ್ತು ಜ್ಯೋತಿ ಹೆಗಡೆ ಅವರಿಂದ ನೃತ್ಯ ಪ್ರದರ್ಶನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

### II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ

- **ದಿನಾಂಕ:09.01.2016ರ ಶನಿವಾರದಂದು ಬೆಳಿಗ್ಗೆ 6.00 ರಿಂದ ಮಧ್ಯಾಹ್ನ 12.00 ಘಂಟೆಯವರೆಗೆ ಮತ್ತು ದಿನಾಂಕ:10.01.2016ರ ಭಾನುವಾರ ಬೆಳಿಗ್ಗೆ 6.00 ರಿಂದ ಸಂಜೆ 6.00 ಘಂಟೆಯವರೆಗೆ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಗಮ ನಿಯಮಿತ ರವರ ವತಿಯಿಂದ ಎನರ್ಜಿ ಎಫಿಶಿಯೆನ್ಸಿ ಸರ್ವಿಸಸ್ ಲಿಮಿಟೆಡ್ (EESL) ರವರ ಸಹಯೋಗದೊಂದಿಗೆ ಡೆಲ್ಪ್ (DELP) ಕಾರ್ಯಕ್ರಮದ ಮುಖಾಂತರ ನಾಡಿನ ಜನತೆಗೆ ಪ್ರತಿ ಬಲ್ಬ್ ಗೆ ರೂ.100 ರಂತೆ 9 ವ್ಯಾಟ್ LED ಬಲ್ಬ್ ಗಳನ್ನು ವಿತರಿಸಲಾಗುತ್ತಿದ್ದು, 2 ಕಿ.ವ್ಯಾ. ವರೆಗೆ ಗರಿಷ್ಠ 5 ಬಲ್ಬ್ ಗಳನ್ನು ಹಾಗೂ 2.ಕಿ.ವ್ಯಾ. ಗಿಂತ ಹೆಚ್ಚು ಇದ್ದರೆ ಗರಿಷ್ಠ 10 ಬಲ್ಬ್ ಗಳನ್ನು ವಿತರಿಸಲಾಗುವುದು. ಸಾರ್ವಜನಿಕರು ಇತ್ತೀಚಿನ ವಿದ್ಯುತ್ ಬಿಲ್ ಪ್ರತಿ , ವಿಳಾಸದ ಚೀಟಿ ಹಾಗೂ ಗುರುತಿನ ಚೀಟಿಯೊಂದಿಗೆ ಪೂರ್ಣ ಮುಂಗಡ ಪಾವತಿ ಮಾಡಿ ಬಲ್ಬ್ ಗಳನ್ನು ಪಡೆಯಬಹುದಾಗಿದೆ.**
- **ಬೆಳಿಗ್ಗೆ 6.30 ರಿಂದ 10.00 ಘಂಟೆಯವರೆಗೆ ಶ್ರೀ ಶಿವಶಂಕರ್ ಮತ್ತು ಶ್ರೀ ಕೃಷ್ಣರಾಜ ಆಚಾರ್ಯ ರವರಿಂದ ರಚಿಸಲ್ಪಟ್ಟ ಬೆಂಗಳೂರಿನ ಹತ್ತು ಜಾಗಗಳ ಮಾಹಿತಿಯುಳ್ಳ ಪುಸ್ತಕವಾದ "ಬೆಂಗಳೂರು ಚುರುಮುರಿ" ಪುಸ್ತಕದ ಪ್ರದರ್ಶನ ಮತ್ತು ಮಾರಾಟವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 7.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ ರೇಷ್ಮೆ ಇಲಾಖೆಯ ವತಿಯಿಂದ ರೇಷ್ಮೆಗೂಡಿನಿಂದ ಮಾಡಿದ ವಿವಿಧ ವಿನ್ಯಾಸದ ಹಾರಗಳು, ಅಲಂಕಾರಿಕ ಮತ್ತು ಇತರೆ ಕರಕುಶಲ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 6.00 ಗಂಟೆಯಿಂದ ಬೆಳಿಗ್ಗೆ 12.00 ಗಂಟೆಯವರೆಗೆ ವಿದ್ಯಾರಣ್ಯ ಸಂಸ್ಥೆ ವತಿಯಿಂದ ವಿದ್ಯಾರಣ್ಯ ಉಜ್ವಲ ಯೋಜನೆಯಡಿಯಲ್ಲಿನ ಫಲಾನುಭವಿಗಳಿಂದ ಉತ್ಪಾದಿಸುತ್ತಿರುವ ವಸ್ತುಗಳಾದ ಮೇಣದ ಬತ್ತಿ, ಕೈಯಿಂದ ತಯಾಸಿದ ಆಭರಣಗಳು ಮತ್ತು ವಿವಿಧ ಬಗೆಯ ಬಟ್ಟೆಯ ವಸ್ತುಗಳ ಪ್ರದರ್ಶನ ಮತ್ತು ಮಾರಾಟವನ್ನು ಏರ್ಪಡಿಸಲಾಗಿದೆ.**